ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ಸೋಮವಾರ, ದಿನಾಂಕ: 02ನೇ ಮಾರ್ಚ್, 2020

ಕೊಡಗು ಜಿಲ್ಲೆಯ ಸರ್ಕಾರಿ ಆಸ್ಪತ್ರೆಗಳಲ್ಲಿ ಸಿಬ್ಬಂದಿ ಹಾಗೂ ತಜ್ಞ ವೈದ್ಯರ ಕೊರತೆ ಕುರಿತು

ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು):-

90 (104) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೊಡಗು ಜಿಲ್ಲೆಯಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಆಸ್ಪತ್ರೆಗಳ ಸಂಖ್ಯೆ ಎಷ್ಟು ಮತ್ತು ಅವು ಯಾವುವು ;

(ಆ) ಸದರಿ ಆಸ್ಪತ್ರೆಗಳಿಗೆ ಮಂಜೂರಾಗಿರುವ, ಕರ್ತವ್ಯ ನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ಹುದೆ ಗಳ ಸಂಖ್ಯೆ ಎಷ್ಟು ; (ಹುದ್ದೆವಾರು, ಆಸ್ಪತ್ರೆವಾರು ಸಂಪೂರ್ಣ ವಿವರ ನೀಡುವುದು)

(ಇ) ಸದರಿ ಆಸ್ಪತ್ರೆಗಳಿಗೆ ತಜ್ಞ ವೈದ್ಯರ ಹಾಗೂ ಸಿಬ್ಬಂದಿಗಳ ಕೊರತೆಯಿಂದಾಗಿ ಸಾರ್ವಜನಿಕರಿಗೆ ಸಕಾಲದಲ್ಲಿ, ಸೂಕ್ತ ಚಿಕಿತ್ಸೆ ದೊರೆಯದೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಸದರಿ ಆಸ್ಪತ್ರೆಗಳಲ್ಲಿ ಖಾಲಿ ಇರುವ ತಜ್ಞ ವೈದ್ಯರು ಹಾಗೂ ಸಿಬ್ಬಂದಿಗಳನ್ನು ನೇಮಿಸಲಾಗುವು ದು?